ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಆಗಸ್ಟ್ 30, 2015

## ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ
## ಡಾ ಎಂ. ಎಂ. ಕಲಬುರ್ಗಿ ಅವರ ಹತ್ಯೆಗೆ ಮುಖ್ಯಮಂತ್ರಿ ದಿಗ್ಭ್ರಮೆ

ಬೆಂಗಳೂರು, ಆಗಸ್ಟ್ 30

ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ ಎಂ. ಎಂ. ಕಲಬುರ್ಗಿ ಅವರ ಹತ್ಯೆಗೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ದಿಗ್ಭ್ರಮೆ ವ್ಯಕ್ತಪಡಿಸಿದ್ದಾರೆ.

ಡಾ ಎಂ. ಎಂ. ಕಲಬುರ್ಗಿ ಅವರು ಧಾರವಾಡದ ತಮ್ಮ ಸ್ವ–ಗೃಹದಲ್ಲಿ ಗುಂಡಿನ ದಾಳಿಗೆ ಬಲಿಯಾಗಿದ್ದಾರೆ ಎಂಬುದು ನನ್ನಲ್ಲಿ ಆಘಾತ, ದುಃಖ ಹಾಗೂ ನೋವನ್ನುಂಟು ಮಾಡಿದೆ. ಈ ಪ್ರಕರಣವು ಸುಸಂಸ್ಕೃತ ನಗರಿ ಎಂದೇ ಹೆಸರಾಗಿದ್ದ ಧಾರವಾಡಕ್ಕೆ ಕಪ್ಪು ಚುಕ್ಕೆಯಾಗಿದೆ.

ಸಾಹಿತ್ಯ ಕ್ಷೇತ್ರದ ಎಲ್ಲಾ ಮಜಲುಗಳಲ್ಲೂ ತಮ್ಮ ಛಾಪನ್ನೊತ್ತಿದ್ದ ಡಾ ಎಂ. ಎಂ. ಕಲಬುರ್ಗಿ ಅವರು ಕನ್ನಡ ಸಾರಸ್ವತ ಲೋಕದಲ್ಲೇ ಸಂಶೋಧನಾ ಕ್ಷೇತ್ರದಲ್ಲಿ ವಿಶೇಷ ಮಾನ್ಯತೆ ಗಳಿಸಿದ್ದರು. ಡಾ ಎಂ. ಎಂ. ಕಲಬುರ್ಗಿ ಅವರು ನೇರ ನಡೆ ಮತ್ತು ನೇರ ನುಡಿಗೆ ಮಾತ್ರವಲ್ಲದೆ, ಸ್ಪಷ್ಟ ಅಭಿವ್ಯಕ್ತಿಗೆ ಹಾಗೂ ಪ್ರಗತಿಪರ ಚಿಂತನೆಗೆ ಹೆಸರಾಗಿದ್ದರು ಎಂದು ಶ್ರೀ ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಡಾ ಎಂ. ಎಂ. ಕಲಬುರ್ಗಿ ಅವರ ಹತ್ಯೆ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರನ್ನು ಕೂಡಲೇ ಪತ್ತೆ ಹೆಚ್ಚಿ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

**********

ಡಿ ಪಿ ಎಂ